ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಡಿಟಿಇ/31/ಇಎಸ್‌ಟಿ(5)/2014, ಭಾಗ /604

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ,
ಬೆಂಗಳೂರು-560 001.
ದಿನಾಂಕ: 12-06-2017

## ಕಾರಣ ಕೇಳಿ ನೋಟೀಸ್

***

ತಾಂತ್ರಿಕ ಶಿಕ್ಷಣ ನಿರ್ದೇಶನಾಲಯದ ಸುತ್ತೋಲೆ ಸಂಖ್ಯೆ: ಡಿಟಿಇ 201 ಇಎಸ್‌ಟಿ(7) 2016, ದಿನಾಂಕ: 21.02.2017ರಲ್ಲಿ ಇಲಾಖೆಯ ಅಧೀನದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಯವರ ಸೇವಾ ವಿಷಯಗಳು, ವೈಯಕ್ತಿಕ ಮತ್ತು ಇನ್ನಿತರೇ ಮನವಿಗಳನ್ನು ಸಂಬಂಧಪಟ್ಟ ಸಂಸ್ಥೆಗಳ ಪ್ರಾಂಶುಪಾಲರು ಹಿಂಬರಹದ ಮೂಲಕ ಸಲ್ಲಿಸದೇ, ಸದರಿ ಮನವಿಯು ಸರ್ಕಾರದ ಆದೇಶ ಮತ್ತು ನಿಯಮಗಳನ್ವಯ ಮತ್ತು ಸಂಬಂಧಪಟ್ಟ ದಾಖಲಾತಿಗಳು ಕ್ರಮಬದ್ಧವಾಗಿದೆಯೇ ಎಂಬ ಬಗ್ಗೆ ಕೂಲಂಕುಶವಾಗಿ ಪರಿಶೀಲಿಸಿ ಸ್ಪಷ್ಟ ಅಭಿಪ್ರಾಯ ಹಾಗೂ ಸೂಕ್ತ ಶಿಫಾರಸ್ಸಿನೊಂದಿಗೆ ಪ್ರಸ್ತಾವನೆಯನ್ನು ನಿರ್ದೇಶನಾಲಯಕ್ಕೆ ಸಲ್ಲಿಸುವಂತೆ ಸೂಚಿಸಲಾಗಿತ್ತು. ಸದರಿ ಸುತ್ತೋಲೆಯಲ್ಲಿನ ಮಾಹಿತಿಯನ್ನು ಮತ್ತೊಮ್ಮೆ ನಿರ್ದೇಶನಾಲಯದ ಸುತ್ತೋಲೆ ದಿನಾಂಕ: 22.05.2017ರಲ್ಲಿ ಸಹ ತಿಳಿಸಲಾಗಿತ್ತು. ಆದಾಗ್ಯೂ ತಮ್ಮ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಮನವಿಗಳನ್ನು ಹಿಂಬರಹದ ಮೂಲಕ ಇಲಾಖೆಗೆ ಸಲ್ಲಿಸಿ, ಮೇಲಾಧಿಕಾರಿಗಳ ಆದೇಶಗಳನ್ನು ಸ್ಪಷ್ಟವಾಗಿ ಉಲ್ಲಂಘಿಸಿರುವುದು ಕಂಡು ಬಂದಿದ್ದು, ಇದು ಕರ್ನಾಟಕ ಸಿವಿಲ್ ಸೇವಾ (ನಡತೆ) ನಿಯಮಗಳು, 1966ರ ನಿಯಮ 3(1)ನ್ನು ಉಲ್ಲಂಘನೆ ಆಗಿರುತ್ತದೆ. ಈ ಸಂಬಂಧ ಈ ಪತ್ರ ತಮ್ಮ ಕೈ ತಲುಪಿದ ಕೂಡಲೇ ಸೂಕ್ತ ವಿವರಣೆಯನ್ನು ಸಲ್ಲಿಸತಕ್ಕದ್ದು, ಇಲ್ಲವಾದಲ್ಲಿ ನಿಮ್ಮ ಮೇಲೆ ಶಿಸ್ತು ಕ್ರಮಕ್ಕೆಗೊಳ್ಳಲು ಕ್ರಮವಹಿಸಲಾಗುವುದು.

ರಡು ನಿರ್ದೇಶಕರಿಂದ ಅನುಮೋದಿಸಲ್ಪಟ್ಟಿದೆ

ಆಡಳಿತಾಧಿಕಾರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು.

ಇವರಿಗೆ,

1. ಪ್ರಾಂಶುಪಾಲರು, ಸರ್ಕಾರಿ ಪಾಲಿಟೆಕ್ನಿಕ್, ಬೀದರ್;
2. ಪ್ರಾಂಶುಪಾಲರು, ಸರ್ಕಾರಿ ಸಿಪಿಸಿ ಪಾಲಿಟೆಕ್ನಿಕ್, ಮೈಸೂರು;
3. ಪ್ರಾಂಶುಪಾಲರು, ಸರ್ಕಾರಿ ಪಾಲಿಟೆಕ್ನಿಕ್, ಚನ್ನಪಟ್ಟಣ;
4. ಪ್ರಾಂಶುಪಾಲರು, ಸರ್ಕಾರಿ ಪಾಲಿಟೆಕ್ನಿಕ್, ಲಿಂಗಸುಗೂರು;
5. ಪ್ರಾಂಶುಪಾಲರು, ಸರ್ಕಾರಿ ಪಾಲಿಟೆಕ್ನಿಕ್, ಕುಷ್ಟಗಿ;
6. ಪ್ರಾಂಶುಪಾಲರು, ಸರ್ಕಾರಿ ಪಾಲಿಟೆಕ್ನಿಕ್, ರಾಯಚೂರು;
7. ಪ್ರಾಂಶುಪಾಲರು, ಎಸ್.ಜೆ. ಸರ್ಕಾರಿ ಪಾಲಿಟೆಕ್ನಿಕ್, ಬೆಂಗಳೂರು;
8. ಪ್ರಾಂಶುಪಾಲರು, ಸರ್ಕಾರಿ ಪಾಲಿಟೆಕ್ನಿಕ್, ವಿಜಯಪುರ;
9. ಪ್ರಾಂಶುಪಾಲರು, ಸರ್ಕಾರಿ ಪಾಲಿಟೆಕ್ನಿಕ್, ಬೇಲೂರು;
10. ಪ್ರಾಂಶುಪಾಲರು, ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ರಾಯಚೂರು.

ಪ್ರತಿ:-

1. ಇ-ಆಡಳಿತ ವಿಭಾಗ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
2. ಕಛೇರಿ ಪ್ರತಿ.

51-17